ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

<u>ಓದಲಾಗಿದೆ:</u>

1. ನಿಗಮದ ಆದೇಶ ಸಂಖ್ಯೆ: ಬಿ6/8379/2008-09 ದಿನಾಂಕ 15.07.2011
2. ನಿಗಮದ ಅದೇಶ ಸಂಖ್ಯೆ: ಬಿ4/9571/2020-21 ದಿನಾಂಕ 04.07.2020
3. ಸರ್ಕಾರದ ಆದೇಶ ಸಂಖ್ಯೆ: ಡಿ.ಪಿ.ಎ.ಆರ್/15/ ಎಸ್.ಎಂ.ಆರ್/2021 ದಿನಾಂಕ 01.04.2021
4. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ನೌಕರರ ಸಂಘ ರವರ ಮನವಿ ಪತ್ರ. ಸಂಖ್ಯೆ: KPTCEU/69/2021-22 ದಿನಾಂಕ: 04.05.2021.

<u>**ಪ್ರಸ್ತಾವನೆ:**</u>

ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ನೌಕರರ ಸಂಘ ರವರ ಮನವಿ ಪತ್ರದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗವು ವ್ಯಾಪಕವಾಗಿ ಹರಡುತ್ತಿದ್ದು ಅಗತ್ಯ ಸೇವೆಯಡಿಯಲ್ಲಿ ಬರುವ ಕವಿಪ್ರನಿನಿ/ ವಿದ್ಯುತ್ ಸರಬರಾಜು ಕಂಪನಿಗಳು/ಪಿ.ಸಿ.ಕೆ.ಎಲ್ ನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರು ನಿರಂತರ ವಿದ್ಯುತ್ ಪ್ರಸರಣ ಮತ್ತು ವಿತರಣೆ ಕಾರ್ಯದಲ್ಲಿ ತೊಡಗಿಸಿಕೊಂಡಿರುವಾಗ, ಆಕಸ್ಮಿಕವಾಗಿ ಕೋವಿಡ್ ಸೋಂಕಿಗೆ ಒಳಗಾಗುತ್ತಿದ್ದು ಇದು ಕುಟುಂಬದ ಅವಲಂಬಿತ ಸದಸ್ಯರಿಗೂ ಸಹಾ ಹರಡುತ್ತಿದ್ದು ಚಿಕಿತ್ಸೆಗೆ ಸರ್ಕಾರಿ/ಖಾಸಗಿ ಆಸ್ಪತ್ರೆಗೆ ದಾಖಲಾಗುತ್ತಿದ್ದು ಚಿಕಿತ್ಸೆಗಳಗಾಗಿ, ಅಂದಾಜು ವೆಚ್ಚವನ್ನು ಖಾಸಗಿ ಆಸ್ಪತ್ರೆಗಳಲ್ಲಿ ಮುಂಗಡವಾಗಿ ಠೇವಣಿ ಮಾಡಬೇಕಾಗಿರುವುದನ್ನು ಪರಿಗಣಿಸಿ ವೈದ್ಯಕೀಯ ಮುಂಗಡ ಮಂಜೂರು ಮಾಡಲು ಕೋರಿರುವುದರಿಂದ, ಮನವಿಯನ್ನು ಪರಿಗಣಿಸಿ ಈ ಕೆಳಕಂಡಂತೆ ಆದೇಶವನ್ನು ಹೊರಡಿಸಿದೆ.

<u>**ಆದೇಶ ಸಂಖ್ಯೆ: ಕವಿಪ್ರನಿನಿ/ಬಿ4/20966/2021-22 ಬೆಂಗಳೂರು, ದಿನಾಂಕ:**</u> 7 MAY 2021

ವಿಶ್ವ ಆರೋಗ್ಯ ಸಂಸ್ಥೆಯು ಕೋವಿಡ್-19 ಕಾಯಿಲೆಯನ್ನು ಸರ್ವವ್ಯಾಪಿ ಸಾಂಕ್ರಾಮಿಕ ರೋಗವೆಂದು ಘೋಷಣೆ ಮಾಡಿದ್ದು, ಈ ರೋಗವು ವ್ಯಾಪಕವಾಗಿ ಹರಡುತ್ತಿರುವುದರಿಂದ ಅಗತ್ಯ ಸೇವೆಗಳಡಿಯಲ್ಲಿ ಗುರುತಿಸಿಕೊಂಡು ಕಾರ್ಯನಿರ್ವಹಿಸುತ್ತಿರುವ ಕವಿಪ್ರನಿನಿ/ವಿದ್ಯುತ್ ಸರಬರಾಜು ಕಂಪನಿಗಳು/ಪಿ.ಸಿ.ಕೆ.ಎಲ್.ನ ಅಧಿಕಾರಿ/ನೌಕರರು ಕೋವಿಡ್ ವಿಷಮ ಪರಿಸ್ಥಿತಿಯಲ್ಲೂ ನಿರಂತರ ವಿದ್ಯುತ್ ಪ್ರಸರಣ ಮತ್ತು ವಿತರಣೆ ಕಾರ್ಯದಲ್ಲಿ ತೊಡಗಿಸಿಕೊಂಡಿರುವಾಗ, ಆಕಸ್ಮಿಕವಾಗಿ ಕೋವಿಡ್ ಸೋಂಕಿಗೆ ಒಳಗಾಗುತ್ತಿದ್ದು, ಇದು ಕುಟುಂಬದ ಅವಲಂಬಿತ ಸದಸ್ಯರಿಗೂ ಹರಡುತ್ತಿದೆ.

ಕೋವಿಡ್ ಸೋಂಕಿಗೊಳಗಾದ ಅಧಿಕಾರಿ/ನೌಕರ ಮತ್ತು ಕುಟುಂಬ ಸದಸ್ಯರು ಚಿಕಿತ್ಸೆಗಾಗಿ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವ ಸಂದರ್ಭದಲ್ಲಿ, ಮುಂಗಡವಾಗಿ ಠೇವಣಿ ಮಾಡಲು ಬೇಡಿಕೆ ಇಡುತ್ತಿರುವುದನ್ನು ಪರಿಗಣಿಸಿ ಈಗಾಗಲೇ ನಿಗಮದಲ್ಲಿ ಮಾರಣಾಂತಿಕ ಕಾಯಿಲೆಗಳಿಗೆ ಒಡಂಬಡಿಕೆ ಹೊಂದಿರದ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ಒಟ್ಟು ಅಂದಾಜು ಚಿಕಿತ್ಸಾ ವೆಚ್ಚದ ಶೇ.75 ರಷ್ಟನ್ನು

ಮಂಜೂರು ಮಾಡುತ್ತಿರುವ ಕ್ರಮದಂತೆಯೇ, ಕೋವಿಡ್ ಪ್ರಕರಣಗಳನ್ನು ಮಾರಣಾಂತಿಕವೆಂದು ಪರಿಗಣಿಸಿ ಒಟ್ಟು ಅಂದಾಜು ಚಿಕಿತ್ಸಾ ವೆಚ್ಚದ ಶೇ.75% ರಷ್ಟನ್ನು ವೈದ್ಯಕೀಯ ಮುಂಗಡವಾಗಿ ಪಾವತಿಸಲು ಹಾಗೂ ಚಿಕಿತ್ಸಾನಂತರ ಸಲ್ಲಿಸುವ ಅಂತಿಮ ಬಿಲ್ಲನ್ನು ಉಲ್ಲೇಖ 2 ರಲ್ಲಿ ನಿಗಧಿಪಡಿಸಿರುವ ಕೋವಿಡ್ ಪ್ಯಾಕೇಜ್ ದರಗಳಿಗೆ ಅನುಗುಣವಾಗಿ ಮಿತಿಗೊಳಸಿ ಮುಂಗಡವನ್ನು ಸಕ್ರಮಗೊಳಸುವ, ಉಳಿದ ಮೊತ್ತವನ್ನು ಪಾವತಿಸುವ, ಮುರಿಕೆ ಮಾಡಬೇಕಾದಲ್ಲಿ ಸಂಬಳ ಮತ್ತು ನಿವೃತ್ತಿ ಸವಲತ್ತುಗಳಿಂದ ಕಡಿತಗೊಳಸುವ ಷರತ್ತಿಗೊಳಪಟ್ಟು ಮುಂಗಡವನ್ನು ಮಂಜೂರು ಮಾಡಲು ಅನುಮೋದನೆ ನೀಡಲಾಗಿದೆ. ಈ ರೀತಿ ಮುಂಗಡ ಬೇಕಾದಲ್ಲಿ ಮುಂಚಿತವಾಗಿ ಒಪ್ಪಿಗೆ ಪತ್ರವನ್ನು ನೀಡತಕ್ಕದ್ದು.

| |
|---|
| ಮಾನ್ಯ ವ್ಯವಸ್ಥಾಪಕ ನಿರ್ದೇಶಕರು ರವರಿಂದ ಅನುಮೋದಿಸಲ್ಪಟ್ಟಿದೆ. |

ಪ್ರಧಾನ ವ್ಯವಸ್ಥಾಪಕರು (ಸಿಬ್ಬಂದಿ)
ಕವಿಪ್ರನಿನಿ

**ಪ್ರತಿಗಳು:**

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು (ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್ (ವಿ) ಕವಿಪ್ರನಿನಿ/ಎಸ್ಕಾಂಗಳು.
5. ವ್ಯವಸ್ಥಾಪಕ ನಿರ್ದೇಶಕರು/ ನಿರ್ದೇಶಕರು (ಪ್ರಸರಣ)(ಹಣಕಾಸು)/(ಆ ಮತ್ತು ಮಾ.ಸಂ.) ಕವಿಪ್ರನಿನಿ ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು.
6. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯ ನಿರ್ವಾಹಕ ಇಂಜಿನಿಯರ್ (ವಿ)/ ಉಪ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ ಎಸ್ಕಾಂಗಳು.
8. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
9. ಲೆಕ್ಕಾಧಿಕಾರಿ, ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿಭವನ, ಬೆಂಗಳೂರು.

**ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ https://kptcl.karnataka.gov.in ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.**

ಪ್ರತಿಗಳು ಮಾಹಿತಿಗಾಗಿ:

10. ಶ್ರೀ ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿನಿ ನೌಕರರ ಸಂಘ, ಬೆಂಗಳೂರು ಹಾಗೂ ನಿರ್ದೇಶಕರು, ಕವಿಪ್ರನಿನಿ ಮತ್ತು ವಿಸಕಂಗಳು.
11. ಶ್ರೀ ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ, ನಿರ್ದೇಶಕರು ಕವಿಪ್ರನಿನಿ ಹಾಗೂ ವಿಸಕಂಗಳು.
12. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ನೌಕರರ ಸಂಘ ಬೆಂಗಳೂರು.
13. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
14. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ ಬೆಂಗಳೂರು.
15. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಬೆಂಗಳೂರು.
16. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೋಮ ಇಂಜಿನಿಯರುಗಳ ಸಂಘ, ಬೆಂಗಳೂರು.
17. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ ಮತ್ತು ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.